# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ರ ಸಾಲಿನಲ್ಲಿ ಸಿ.ಇ.ಟಿ ಮೂಲಕ ಆಯ್ಕೆಯಾದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 507 ಬಿಎಂಎಸ್ 2013, ದಿನಾಂಕ:31.08.2013.
2. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ಇವರ ಪ್ರಸ್ತಾವನೆ ಸಂಖ್ಯೆ:ದೇಹಿನಿ/ಕ್ರಿ.ಯೋ/ಸಿಆರ್-09/2022-23, ದಿನಾಂಕ:14.09.2022.

**********

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಲ್ಲಿ ಡಿ .ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಇಂಜಿನಿಯರಿಂಗ್, ವೈದ್ಯಕೀಯ, ದಂತವೈದ್ಯಕೀಯ ಇತ್ಯಾದಿ ವೃತ್ತಿಪರ ಉನ್ನತ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ಎಲ್ಲಾ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆ ಪರಿಷ್ಕೃತ ಮಾರ್ಗಸೂಚಿಗಳನ್ನು ಅನುಸರಿಸುವ ಷರತ್ತಿಗೊಳಪಟ್ಟು ವಾರ್ಷಿಕ ರೂ.2% ಬಡ್ಡಿ ದರದಲ್ಲಿ ಗರಿಷ್ಟ ರೂ.1.00 ಲಕ್ಷಗಳು ಅಥವಾ ವಾಸ್ತವಿಕ ವೆಚ್ಚಕ್ಕೆ ಅನುಗುಣವಾಗಿ ಸಾಲವನ್ನು ಮಂಜೂರು ಮಾಡಲು ಆದೇಶಿಸಿದೆ.

ಮೇಲೆ ಓದಲಾದ (2) ರಲ್ಲಿ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ ವಿವಿಧ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ತಾಂತ್ರಿಕ ಕಾರಣದಿಂದ 2021-22ನೇ ಸಾಲಿನಲ್ಲಿ ಅನುಷ್ಠಾನಗೊಳಿಸಿರುವುದಿಲ್ಲ. ಈ ಬಗ್ಗೆ ದಿ:13.09.2022 ರಂದು ನಡೆದ ನಿಗಮದ ನಿರ್ದೇಶಕ ಮಂಡಳಿಯಲ್ಲಿ ಚರ್ಚಿಸಿ 2021-22ನೇ ಸಾಲಿನಲ್ಲಿ ಸಿ.ಇ.ಟಿ ಮೂಲಕ ಆಯ್ಕೆಯಾಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ವಿವಿಧ ನಿಗಮಗಳಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಸಾಲ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸಾಲ-ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸಾಲ-ಸೌಲಭ್ಯ ನೀಡಲು ಅನುಮೋದನೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಡಿ .ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 561 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 19-10-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದಿಂದ 2021-22ರ ಸಾಲಿನಲ್ಲಿ ಸಿ.ಇ.ಟಿ ಮೂಲಕ ಆಯ್ಕೆಯಾದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಾಲ-ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಿ 2021-22ನೇ ಸಾಲಿಗೆ ಸೀಮಿತಗೊಳಿಸಿ ಎರಡನೇ ವರ್ಷದ ವಿದ್ಯಾರ್ಥಿಗಳಿಗೆ ಸಾಲ ಒದಗಿಸಲು ಅರಿವು ಸಾಲ ಯೋಜನೆಯ ಮಾರ್ಗಸೂಚಿಗೆ ವಿನಾಯಿತಿ ನೀಡಿ ಆದೇಶಿಸಿದೆ.

19/10/22

...2

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 19/10/2022

**(ಶಾಹೀನ್ ಪರ್ವೀನ್.ಕೆ )**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

19/10

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
3. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಶಾಖಾ ರಕ್ಷಾ ಕಡತ.

***********